ಕಂದಾಯ ಇಲಾಖೆ ಆಡಳಿತ ಸುಧಾರಣೆ ಕ್ರಮಗಳು.

2340(2831) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶ್ರೀಹಾರನಹಳ್ಳಿ ರಾಮಸ್ವಾಮಿ ನೇತೃತ್ವದ ಆಡಳಿತ ಸುಧಾರಣಾ ಸಮಿತಿ ನೀಡಿರುವ ವರದಿಯಲ್ಲಿ ತಿಳಿಸಿರುವ ಪ್ರಕಾರ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆ ಸುಧಾರಣಾ ಕ್ರಮಗಳನ್ನೇನಾದರೂ ಪ್ರಸ್ತಾಪಿಸಲಾಗಿದೆಯೇ

ಆ) ಹಾಗಿದ್ದಲ್ಲಿ ಇದನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಇದನ್ನು ಯಾವಾಗ ಜಾರಿಗೆ ತರಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ಹೌದು.

ಆ) ಆಡಳಿತ ಸುಧಾರಣಾ ಆಯೋಗದ ಮಧ್ಯಂತರ ವರದಿಯನ್ನು ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಉಪ ಸಮಿತಿಯು ಶಿಫಾರಸ್ಸುಗಳನ್ನು ಪರಿಶೀಲಿಸುತ್ತಿದೆ.

ದೇವಸ್ಥಾನಗಳ ನಿಗಮ ಸ್ಥಾಪನೆ.

2341(2850) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) :— ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ವಕ್ಫ್ ಬೋರ್ಡ್ ಮಾದರಿಯಲ್ಲಿ ರಾಜ್ಯದಲ್ಲಿರುವ ಎಲ್ಲಾ ಪ್ರಮುಖ ದೇವಾಲಯಗಳ ನಿಗಮ ಒಂದನ್ನು ಸ್ಥಾಪಿಸಿ ಆದಾಯ ಕ್ರೋಢೀಕರಿಸಿ ಸಣ್ಣ ಮತ್ತು ದೊಡ್ಡ ದೇವಾಲಯಗಳ ನಿರ್ವಹಣೆ ಹಾಗೂ ಕಾರ್ಯನಿರ್ವಹಣೆಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

2. ಇದನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು?

ಶ್ರೀ ಬಾಬುರಾವ್ ಚಿಂಚನಸೂರು (ಮುಜರಾಯಿ ಸಚಿವರು) :—

1. ರಾಜ್ಯದಲ್ಲಿನ ಮುಜರಾಯಿ ದೇವಾಲಯಗಳ ಆಡಳಿತ ನಿರ್ವಹಣೆಗಾಗಿ ಈಗಾಗಲೇ ಏಕರೂಪ ಶಾಸನವನ್ನು ರೂಪಿಸಿದ್ದು ಅದನ್ನು ರಾಜ್ಯದ ಉಭಯ

ಸದನಗಳು ಅಂಗೀಕರಿಸಿದ್ದು ಮಾನ್ಯ ರಾಷ್ಟ್ರಪತಿಗಳ ಅನುಮೋದನೆಗಾಗಿ ಸಲ್ಲಿಸಲಾಗಿದೆ. ಈ ಶಾಸನದಲ್ಲಿ "ಕಾಮನ್‌ಪೂಲ್ ಫಂಡ್" ಎಂಬ ನಿಧಿಯನ್ನು ಸ್ಥಾಪಿಸಲು ಅವಕಾಶ ಕಲ್ಪಿಸಲಾಗಿದೆ. ಈ ಫಂಡ್‌ನಿಂದ ದೇವಾಲಯಗಳ ನಿರ್ವಹಣೆ ಪ್ರಸ್ತಾಪ ಇದೆ.

2. ಸದರಿ ಏಕರೂಪ ಶಾಸನ ಕಾಯ್ದೆ ಜಾರಿಗೆ ಬಂದ ನಂತರ ಇದನ್ನು ಕಾರ್ಯರೂಪಕ್ಕೆ ತರಲು ಪರಿಶೀಲಿಸಲಾಗುವುದು.

ಮೈಸೂರಿನ ತಾಲ್ಲೂಕಿನ ಕಡಕೊಳದಿಂದ ಜಲಪುರದವರೆಗೆ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸುವುದು.

2342(2851) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) :— ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮೈಸೂರು ತಾಲ್ಲೂಕಿನ ಕಡಕೊಳದಿಂದ ಜಲಪುರದವರೆಗೆ ಕೈಗಾರಿಕೆಯನ್ನು ಆಕರ್ಷಿಸಲು ಎಲ್ಲಾ ಪೂರಕ ಸೌಲಭ್ಯಗಳು ಲಭ್ಯವಿದ್ದು ಇಲ್ಲಿ ಕೈಗಾರಿಕಾ ಅಭಿವೃದ್ಧಿ ಪಡಿಸಲು ಕರ್ನಾಟಕ ಕೈಗಾರಿಕಾಭಿವೃದ್ಧಿ ನಿಗಮದಿಂದ ಕೈಗೊಂಡಿರುವ ಕ್ರಮವೇನು;

ಆ) ಈಗಾಗಲೇ ಬಂದಿರುವ ಮನವಿಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಳ್ಳಲಾಗಿದೆ; ಇದನ್ನು ಯಾವಾಗಿನಿಂದ ಅಭಿವೃದ್ಧಿಗೊಳಿಸಲಾಗುವುದು;

ಇ) ಮೈಸೂರು ತಾಲ್ಲೂಕಿನಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಕೈಗಾರಿಕೆಗಳು ಸ್ಥಾಪಿತವಾಗಿದೆ; ಇದರಲ್ಲಿ ಎಷ್ಟು ಕಾರ್ಯಾರಂಭ ಮಾಡಲಾಗಿದೆ.

ಈ) ಮೈಸೂರು ನಗರ ಸುತ್ತ ನಷ್ಟದಲ್ಲಿರುವ ಎಷ್ಟು ಉದ್ದಿಮೆಗಳನ್ನು ಪುನರುಜ್ಜೀವನಗೊಳಿಸಲಾಗಿದೆ;

ಉ) ನಷ್ಟದಲ್ಲಿರುವ ಉದ್ದಿಮೆ ಎಷ್ಟು ಇವುಗಳನ್ನು ಲಾಭಗಳಿಸುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :—

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಈಗಾಗಲೇ ನಂಜನಗೂಡು ಮತ್ತು ತಾಂಡ್ಯ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಿರುತ್ತಾರೆ. ಇದರಲ್ಲಿ ನಂಜನಗೂಡಿನ ಕೈಗಾರಿಕಾ ಪ್ರದೇಶದಲ್ಲಿ 25 ಎಕರೆ ಹಾಗೂ ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿ 7(ಎಕರೆ ಕೈಗಾರಿಕಾ ಪ್ರದೇಶವು ಹಂಚಿಕೆಗಾಗಿ ಖಾಲಿ ಇರುತ್ತದೆ.